**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು**

**ವಿರಾಜಪೇಟೆ**

**ಓ.ಎಸ್. ಸಂಖ್ಯೆ ಃ *66/2023***

**ಪಿಡಬ್ಲ್ಯೂ- *1* ಪಿ ಎಂ ಪ್ರಸನ್ನ**

**ದಿನಾಂಕ ಃ *02-02-2024* ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ ಃ ಶ್ರೀ. ವಿ ಜಿ ಆರ್ ವಾದಿ ಪರ ವಕೀಲರಿಂದ ಃ**

ಈ ದಾವೆಯಲ್ಲಿ ನಾನು ವಾದಿಯಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು, ಸದರಿ ಪ್ರಮಾಣ ಪತ್ರದಲ್ಲಿರುವ ಅಂಶಗಳನ್ನು ನಾನೇ ಖುದ್ದಾಗಿ ಬರೆಸಿರುತ್ತೇನೆ ಹಾಗೂ ಅದರಲ್ಲಿರುವ ಅಂಶಗಳು ಸತ್ಯವೆಂದು ಪ್ರಮಾಣೀಕರಿಸುತ್ತೇನೆ.

ನನ್ನ ದಾವೆಯ ಜೊತೆ ಕೆಲವು ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ. ಎರಡು ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ1 ಹಾಗೂ 2 ಎಂದು, ಎರಡು ಜಮಾಬಂಧಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ3 ಹಾಗೂ 4 ಎಂದು, ಆಕಾರ್ ಬಂದ್‌ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ5 ಎಂದು, ಒಂದು ನಕಾಶೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ6 ಎಂದು ಗುರುತಿಸಲಾಯಿತು.

ಈ ಹಂತದಲ್ಲಿ ಪ್ರತಿವಾದಿ ಪರ ವಕೀಲರು ಪಾಟಿ ಸವಾಲಿಗೆ ಸಮಯಾವಕಾಶವನ್ನು ಕೋರಿದ್ದು, ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಿಂದ ಬೆರಳಚ್ಚು ಪಡಿಸಲಾಯಿತು.)

ಓ. ಹೇ. ಕೇ. ಸ. ಇದೆ.

ಸಹಿ/-
(ಸಂತೋಷ ಕೊಠಾರಿ)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.
ವಿರಾಜಪೇಟೆ.